ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	225
ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	14.12.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಪಟ್ಟಾ ಭೂಮಿ, ಹಳ್ಳ, ತೊರೆ, ಕೆರೆ, ನದಿ, ಪ್ರದೇಶಗಳಲ್ಲಿ ಮರಳು ತೆಗೆಯಲು ಅವಕಾಶ ನೀಡುವ ಕರ್ನಾಟಕ ನೂತನ ಮರಳು ನೀತಿ 2020 ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ನೂತನ ಮರಳು ನೀತಿ ಜಾರಿಗೆ ತಂದಿರುವ ಉದ್ದೇಶಗಳೇನು; (ವಿವರ ನೀಡುವುದು).	ಜಾರಿಯಲ್ಲಿರುತ್ತದೆ. ರಾಜ್ಯದ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಸುಲಭವಾಗಿ ಕಡಿಮೆ ದರದಲ್ಲಿ ಮರಳು ಪೂರೈಕೆ ಮಾಡುವ ಸಂಬಂಧ ಹೊಸ ಮರಳು ನೀತಿ, 2020ನ್ನು ಜಾರಿಗೊಳಿಸಲಾಗಿರುತ್ತದೆ.
ಆ)	ಈ ಹೊಸ ಮರಳು ನೀತಿಯಡಿ ಬೀದರ್ ಜಿಲ್ಲೆಯಲ್ಲಿ ಮರಳು ತೆಗೆಯಲು ಗುರುತಿಸಿರುವ ಮರಳು ನಿಕ್ಷೇಪಗಳು ಯಾವುವು; ಈ ನಿಕ್ಷೇಪಗಳಲ್ಲಿ ಲಭ್ಯವಿರುವ ಮರಳಿನ ಪ್ರಮಾಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಹರಿಯುತ್ತಿರುವ ಹಳ್ಳಗಳು ಹಾಗೂ ಮಾಂಜ್ರಾ ನದಿ ಪಾತ್ರದಲ್ಲಿ ಮಣ್ಣು ಮಿಶ್ರಿತ ಕಪ್ಪು ಮರಳಿದ್ದು, ಸದರಿ ಮಣ್ಣು ಮಿಶ್ರಿತ ಮರಳು ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲು ಉತ್ತಮ ಗುಣಮಟ್ಟವಲ್ಲದ ಕಾರಣ ಹೊಸ ಮರಳು ನೀತಿಯನ್ವಯ ಯಾವುದೇ ಮರಳು ನಿಕ್ಷೇಪ ಪ್ರದೇಶಗಳನ್ನು ಗುರುತಿಸಿರುವುದಿಲ್ಲ.
ಇ)	ಈ ಮರಳು ನೀತಿಯಿಂದ ಸರ್ಕಾರಕ್ಕೆ ಪ್ರಸಕ್ತ ಸಾಲಿನಲ್ಲಿ ಸಂದಾಯವಾಗಿರುವ ಆದಾಯವೆಷ್ಟು; ಈ ನೀತಿಯಡಿ ಪ್ರತಿ ಮೆಟ್ರಿಕ್ ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು; ದರ ನಿಗದಿಪಡಿಸಲು ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು)	ಪ್ರಸ್ತುತ, ಹೊಸ ಮರಳು ನೀತಿ, 2020 ಜಾರಿಯಲ್ಲಿದ್ದು, ಸದರಿ ಮರಳು ನೀತಿಯಂತೆ ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು 2021 ನ್ನು ಜಾರಿಗೊಳಿಸ ಲಾಗಿರುತ್ತದೆ. • ಅಧಿಸೂಚನೆ ಹೊರಡಿಸಿರುವ ಮರಳು ನಿಕ್ಷೇಪ ಪ್ರದೇಶ / ಬ್ಲಾಕ್ ಗಳಲ್ಲಿ ಮರಳು ತೆಗೆಯುವ ಕಾರ್ಯ ಪ್ರಾರಂಭವಾಗಬೇಕಾಗಿರುತ್ತದೆ. • I, II ಮತ್ತು III ನೇ ಶ್ರೇಣಿಯ ಹಳ್ಳ / ತೊರೆ ಮತ್ತು ಕೆರೆಗಳಲ್ಲಿ ಮರಳು ತೆಗೆದು ಗ್ರಾಮ ಪಂಚಾಯಿತಿಗಳ ಮೂಲಕ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 300/- ಗಳನ್ನು ನಿಗದಿಪಡಿಸಲಾಗಿರುತ್ತದೆ.

		• IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ಸರ್ಕಾರದ ಆದೇಶ ಸಂಖ್ಯೆ ಸಿಐ 344 ಎಂಎಂಎನ್ 2019, ದಿನಾಂಕ 18.05.2020 ರಂತೆ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಮೆ|| ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೋರೇಷನ್ ಲಿ., ಮತ್ತು ಮೆ|| ಹಟ್ಟಿ ಚಿನ್ನದ ಗಣಿ ನಿಯಮಿತ ಇವರಿಗೆ ವಹಿಸಲಾಗಿರುತ್ತದೆ. • ಸದರಿ ಸಂಸ್ಥೆಗಳಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 700/- ಗಳನ್ನು ನಿಗದಿಪಡಿಸಲಾಗಿರುತ್ತದೆ. ಹೊಸ ಮರಳು ನೀತಿಯಡಿ ಪ್ರತಿ ಮೆಟ್ರಿಕ್ ಟನ್ ಮರಳಿಗೆ ದರ ನಿಗದಿಪಡಿಸುವ ಸಂಬಂಧ ವಿಸ್ತೃತವಾಗಿ ಚರ್ಚೆ ನಡೆಸಿದ್ದು, ಮರಳು ಗಣಿಗಾರಿಕೆಯಿಂದ ಸರ್ಕಾರಕ್ಕೆ ಬರಬೇಕಾದ ರಾಜಧನ, ಮರಳು ಗಣಿಗಾರಿಕೆ, ಸಾಗಾಣಿಕೆ ಮತ್ತು ಸಂಗ್ರಹಣೆಗೆ ತಗಲುಬಹುದಾದ ವೆಚ್ಚ, ಸ್ಟಾಕ್ ಯಾರ್ಡ್ ನಿರ್ವಹಣೆ ವೆಚ್ಚ, ಗಣಿಗಾರಿಕೆ ನಿರ್ವಹಿಸುವ ಸಂಸ್ಥೆಗಳ ಲಾಭಾಂಶ ಹಾಗೂ ಇತರೆ ಎಲ್ಲಾ ಖರ್ಚು ವೆಚ್ಚಗಳನ್ನು ಪರಿಗಣಿಸಿ ಮೇಲ್ಕಂಡ ದರವನ್ನು ನಿಗದಿಪಡಿಸಲಾಗಿರುತ್ತದೆ.

ಸಂಖ್ಯೆ ಸಿಐ 604 ಎಂಎಂಎನ್ 2021

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.